# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 127(57) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಡಾ.ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ: | 11-08-2025. |
| ಉತ್ತರಿಸುವ ಸಚಿವರು: | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಜ್ಞ ವೈದ್ಯರ ಸಂಖ್ಯೆ ಎಷ್ಟು; | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಒಟ್ಟು 711 ತಜ್ಞ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ) | ವೈದ್ಯರ ಕೊರತೆ ಇರುವುದು ಕಂಡು ಬಂದಿದೆಯೇ; ಎಷ್ಟು ಹುದ್ದೆಗಳು ಖಾಲಿ ಇವೆ; | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿದ್ದು, ಒಟ್ಟು 267 ಹುದ್ದೆಗಳು ಖಾಲಿಯಿರುತ್ತವೆ. |
| ಇ) | ವೈದ್ಯರ ನಿವೃತ್ತಿ ವಯಸ್ಸನ್ನು 65ಕ್ಕೆ ಹೆಚ್ಚಿಸಿರುವುದರಿಂದ ಯುವಕರು ಉದ್ಯೋಗದ ಅವಕಾಶದಿಂದ ವಂಚಿತರಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲು ಚಿಂತಿಸಿದೆ. | ರಾಜ್ಯದಲ್ಲಿ ಸೂಪರ್ ಸ್ಪೆಷಾಲಿಟಿ ವೈದ್ಯರುಗಳ ಕೊರತೆಯಿಂದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಬೋಧನೆ ಹಾಗೂ ರೋಗಿಗಳಿಗೆ ಚಿಕಿತ್ಸೆ ನೀಡುವಲ್ಲಿ ತೊಂದರೆಯಾಗುತ್ತಿರುವುದರಿಂದ ಹಾಗೂ ಅರ್ಹತೆ ಮತ್ತು ಸೇವಾ ಅನುಭವದ ತಜ್ಞ ವೈದ್ಯರ ಕೊರತೆ ಮತ್ತು ಅಲಭ್ಯತೆಯಿಂದ ತಜ್ಞ ವೈದ್ಯರ ನಿವೃತ್ತಿ ವಯಸ್ಸನ್ನು 65ಕ್ಕೆ ಹೆಚ್ಚಿಸಲಾಗಿದೆ.<br><br>ಮುಂದುವರೆದು, ರಾಷ್ಟ್ರೀಯ ವೈದ್ಯಕೀಯ ಆಯೋಗವು ಸಾಕಷ್ಟು ಪ್ರಮಾಣದಲ್ಲಿ ವೈದ್ಯರ ಹುದ್ದೆಗಳನ್ನು ಪ್ರಾಥಮಿಕ ಹಂತದಲ್ಲಿ ಹೆಚ್ಚಿಸಿರುವುದರಿಂದ ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಯುವ ಜನತೆಗೆ ಉದ್ಯೋಗಾವಕಾಶದ ಕೊರತೆಯಿರುವುದಿಲ್ಲ. |

ಕಡತ ಸಂಖ್ಯೆ: ಎಂಇಡಿ 151 ಆರ್‌ಜಿಯು 2025

**(ಡಾ:ಶರಣ ಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು